# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 65

ಸದಸ್ಯರ ಹೆಸರು : ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 07-12-2020

ಉತ್ತರಿಸುವ ಸಚಿವರು : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ

| ಪ್ರಶ್ನೆ | ಉತ್ತರ |
|---|---|
| (ಅ) 2020-21ನೇ ಆಯವ್ಯಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಮೀಸಲಿರಿಸಿದ ಅನುದಾನ ಎಷ್ಟು; | 2020-21ನೇ ಸಾಲಿನ ಆಯವ್ಯಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಮೀಸಲಿರಿಸಿದ ಒಟ್ಟು ಅನುದಾನ ರೂ.24636.47 ಕೋಟಿಗಳು. |
| (ಆ) ಸದರಿ ಅನುದಾನದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಯಾವ ಯಾವ ಕಾಲೇಜಿಗೆ ಎಷ್ಟು ಅನುದಾನ ಮೀಸಲಿಡಲಾಗಿದೆ; | ಪದವಿ ಪೂರ್ವ ಶಿಕ್ಷಣವು ರಾಜ್ಯ ವಲಯದ ವ್ಯಾಪ್ತಿಗೆ ಬರುವುದರಿಂದ, ವೇತನ/ವೇತನೇತರ ವೆಚ್ಚಗಳು ಹಾಗೂ ಪರೀಕ್ಷಾ ವೆಚ್ಚಗಳಿಗೆ ಒಟ್ಟಾರೆಯಾಗಿ ಆಯವ್ಯಯದಲ್ಲಿ ಅನುದಾನವನ್ನು ಒದಗಿಸಲಾಗಿರುತ್ತದೆ. ಆದ್ದರಿಂದ, ಕಾಲೇಜುವಾರು ಪ್ರತ್ಯೇಕವಾಗಿ ಅನುದಾನವನ್ನು ಮೀಸಲಿಟ್ಟಿರುವುದಿಲ್ಲ. |
| (ಇ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಪದವಿ ಪೂರ್ವ ಅನುದಾನಿತ ಶಾಲೆಗಳಲ್ಲಿನ ಎಷ್ಟು ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ಅನುಮೋದನೆ ನೀಡಿದೆ? (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಪದವಿ ಪೂರ್ವ ಶಾಲಾ ಕಾಲೇಜುಗಳ ಹುದ್ದೆಗಳ ಮಾಹಿತಿಯನ್ನು ನೀಡುವುದು) | ರಾಜ್ಯದ ಅನುದಾನಿತ ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನಿಧನ, ನಿವೃತ್ತಿ ಮತ್ತು ರಾಜೀನಾಮೆಯಿಂದ ತೆರವಾದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅನುಮೋದನೆ ನೀಡಲಾದ ವಿವರ ಈ ಕೆಳಕಂಡಂತಿದೆ. |

| ಕ್ರ.ಸಂ | ಸರ್ಕಾರದ ಆದೇಶ ಸಂಖ್ಯೆ ಮತ್ತು ದಿನಾಂಕ | ಹುದ್ದೆಗಳ ಸಂಖ್ಯೆ |
|---|---|---|
| 1 | ಪ್ರಾಥಮಿಕ ಶಾಲೆಗಳು:<br>ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 267 ಪಿಎಂಸಿ 2007, ದಿನಾಂಕ:02.10.2007ರಂತೆ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಹೆಚ್ಚುವರಿ | -- |

| | | | |
|---|---|---|---|
| | | ಶಿಕ್ಷಕರಿಂದ ಮಾತ್ರ ಭರ್ತಿ ಮಾಡಲಾಗುತ್ತಿದೆ. | |
| | 2 | <u>ಪ್ರೌಢ ಶಾಲೆಗಳು:</u><br>ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್‌ಇಪಿ 2017, ದಿನಾಂಕ:25.09.2018 ರಂತೆ ಒಟ್ಟು 882 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ. | 882 |
| | 3 | <u>ಪದವಿ ಪೂರ್ವ ಕಾಲೇಜುಗಳು:</u><br>1. ಸರ್ಕಾರದ ಆದೇಶ ಸಂಖ್ಯೆ: ಇಡಿ 159 ಟಿಪಿಯು 2012, ದಿನಾಂಕ:16.05.2013 ರಂತೆ ಒಟ್ಟು 189 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br>2. ಸರ್ಕಾರದ ಆದೇಶ ಸಂಖ್ಯೆ: ಇಡಿ 159 ಟಿಪಿಯು 2012, ದಿನಾಂಕ:22.11.2013 ರಂತೆ ಒಟ್ಟು 291 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br>3. ಸರ್ಕಾರದ ಆದೇಶ ಸಂಖ್ಯೆ: ಇಡಿ 144 ಟಿಪಿಯು 2016, ದಿನಾಂಕ:09.02.2017 ರಂತೆ ಒಟ್ಟು 328 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br>4. ಸರ್ಕಾರದ ಆದೇಶ ಸಂಖ್ಯೆ: ಇಡಿ 144 ಟಿಪಿಯು 2016, ದಿನಾಂಕ:12.06.2017 ರಂತೆ ಒಟ್ಟು 51 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br>5. ಸರ್ಕಾರದ ಆದೇಶ ಸಂಖ್ಯೆ: ಇಡಿ 144 ಟಿಪಿಯು 2016, ದಿನಾಂಕ:12.06.2017 ರಂತೆ ಒಟ್ಟು 50 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ. | 909 |

ಇಪಿ 152 ಯೋಯೋಕ 2020

(ಎಸ್. ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ

ಸಕಾಲ ಸಚಿವರು